PAPER CLIPPINGS
ವಿಷಯ : DEPARTMENT / SUBJECT:
ಹೆಸರು : NAME OF THE NEWS PAPER:
ದಿನಾಂಕ : DATE :

# ಅಪಾರ ಮಾನವ ಸಂಪನ್ಮೂಲ, ಹಣದ ಅಪವ್ಯಯ ತಡೆ ಸಾಧ್ಯ

**ಏಕಕಾಲದಲ್ಲಿ ಕೇಂದ್ರ,ರಾಜ್ಯ ಚುನಾವಣೆಗಳನ್ನು ನಡೆಸಲು ತಾನು ಸಿದ್ಧವಿರುವುದಾಗಿ ಆಯೋಗವು ಹೇಳಿದೆ. ಇದರಿಂದ ಆರ್ಥಿಕ ನಷ್ಟದ ತಡೆ, ಚುನಾವಣಾ ಭ್ರಷ್ಟಾಚಾರಕ್ಕೂ ಕಡಿವಾಣ ಬೀಳಲಿದೆ. ಅಭಿವೃದ್ಧಿಪರ ತೀರ್ಮಾನಗಳನ್ನು ಸರ್ಕಾರಗಳು ಕೈಗೊಳ್ಳಲು ಸಾಧ್ಯವಾಗಬಹುದು. ಪದೇ ಪದೆ ಬಂದೆರಗುವ ನೀತಿ ಸಂಹಿತೆ ಭೀತಿಯೂ ಇರುವುದಿಲ್ಲ.**






■ ಪಿ.ರಾಜೀವ್
ಶಾಸಕರು, ಕುಡಚಿ

ಈಗ ನಡೆಯುತ್ತಿರುವ ವಿಧಾನಸಭೆಯ ಅಧಿವೇಶನವು ಹೊಸದೊಂದು ವಿಪರ್ಯಾಸಕ್ಕೆ ಸಾಕ್ಷಿಯಾಗಿದೆ. ತಮ್ಮ ವಿಷಯ ಮಂಡನೆಗೆ ಸಭಾಧ್ಯಕ್ಷರು ಅನುಮತಿ ನೀಡುತ್ತಿಲ್ಲ ಎಂದು ಪ್ರತಿಪಕ್ಷಗಳು ಗೋಳಿಡುವುದು ಸಹಜವಾಗಿತ್ತು. ಆದರೆ ಮೊನ್ನೆಯ ಅಧಿವೇಶನ ಇದಕ್ಕೆ ಪರ್ಯಾಯದಂತಿತ್ತು. ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಒಂದು ದೇಶ ಒಂದು ಚುನಾವಣೆ ಎಂಬ ವಿಷಯದ ಕುರಿತು ವಿಶೇಷ ಚರ್ಚೆಗೆ ಮುನ್ನುಡಿ ಹಾಡಿದ್ದರು. ಜತಗೆ ವಿಧಾನಸಭೆಯ ಮೂಲ ಉದ್ದೇಶವೇ ಅಭಿಪ್ರಾಯವನ್ನು ವ್ಯಕ್ತಪಡಿಸುವುದಾಗಿದೆ. ಮುಕ್ತವಾದ ಅವಕಾಶವನ್ನು ನೀಡುತ್ತಿದ್ದೇನೆ, ಸದನದ ಬಾವಿಗಿಳಿದು ಏಕೆ ಆಕ್ರೋಶವನ್ನು ವ್ಯಕ್ತಪಡಿಸದೆ, ಆಸನಗಳಲ್ಲಿ ಕುಳಿತು ನಿಮ್ಮ ಅಭಿಪ್ರಾಯ ವ್ಯಕ್ತಪಡಿಸಿ ಎಂದರೂ, ಕಾಂಗ್ರೆಸ್ ಶಾಸಕರು ಅದನ್ನು ಪುರಸ್ಕರಿಸುವ ಮನಸ್ಥಿತಿ ಹೊಂದಿರಲಿಲ್ಲ. ಅವಕಾಶ ನೀಡಿದರೂ ಚರ್ಚಿಸುವುದಿಲ್ಲ, ಬೇರೆಯವರು ಚರ್ಚಿಸಲೂ ಬಿಡುವುದಿಲ್ಲ ಎಂಬ ಮೊಂಡುವಾದಕ್ಕೆ ಕಲಾಪ ಬಲಿಯಾಯಿತು.

ಒಂದು ದೇಶ-ಒಂದು ಚುನಾವಣೆ ಎಂಬುದು ಕೇವಲ ಚರ್ಚಾ ವಿಷಯವಲ್ಲ, ಈ ದೇಶದ ಇಂದಿನ ಅಗತ್ಯತೆ ಎಂಬುದನ್ನು ಪ್ರಧಾನಿ ಮೋದಿಯವರು ಒತ್ತಿ ಹೇಳಿದ್ದಾರೆ. ಪ್ರಧಾನಿಗಳು ಕಳೆದ ಸರ್ಕಾರದ ಅವಧಿಯಿಂದಲೂ ಈ ವಿಷಯ ಪ್ರಸ್ತಾಪಿಸುತ್ತಿದ್ದಾರೆ. ಹಿಂದಿನ ರಾಷ್ಟ್ರಪತಿಗಳಾಗಿದ್ದ ಪ್ರಣಬ್ ಮುಖರ್ಜಿ ಹಾಗೂ ಇಂದಿನ ರಾಷ್ಟ್ರಪತಿ ರಾಮನಾಥ ಕೋವಿಂದ್ ಸಹ ಭಾರತಕ್ಕೆ ಇದು ಅವಶ್ಯಕ ಎಂದಿದ್ದು ಸ್ಮರಣೀಯ. ದೇಶದ ಅಭಿವೃದ್ಧಿ ಪಥದ ಮಾರ್ಗದರ್ಶಕ ಸಂಸ್ಥೆ ಎನಿಸಿಕೊಳ್ಳುವ ನೀತಿಆಯೋಗ ಭಾರತ ದೇಶಕ್ಕೆ ಅಭಿವೃದ್ಧಿಯ ದೃಷ್ಟಿಯಿಂದ ಒಂದು ಚುನಾವಣೆ ಎಂಬ ಪರಿಕಲ್ಪನೆ ಅವಶ್ಯಕವಾಗಿದೆ ಎಂದು ಹೇಳುತ್ತಾ, ಕೆಲವು ಮಾರ್ಗದರ್ಶಕ ಸೂತ್ರಗಳನ್ನೂ ನೀಡಿದೆ. ಭಾರತದ ಕಾನೂನು ಆಯೋಗವು ಇದನ್ನು ಪ್ರಶಂಸಿಸಿದೆ. ಸಂಸದೀಯ ಕಮಿಟಿಯೂ ಇದರ ಅವಶ್ಯಕತೆಯನ್ನು ಒತ್ತಿ ಹೇಳಿದೆ.

**ಏನಿದು ಒಂದು ದೇಶ-ಒಂದು ಚುನಾವಣೆ ಪರಿಕಲ್ಪನೆ?**

ದೇಶದ 28 ರಾಜ್ಯಗಳು 9 ಕೇಂದ್ರಾಡಳಿತ ಪ್ರದೇಶಗಳು ಒಂದೇ ಸಮಯದಲ್ಲಿ ಚುನಾವಣೆಯನ್ನು ಎದುರಿಸುತ್ತಿಲ್ಲ, ಸರಾಸರಿ 2 ತಿಂಗಳಿನಲ್ಲಿ ನಾಲ್ಕೈದು ರಾಜ್ಯಗಳಲ್ಲಿ ಚುನಾವಣೆಯು ಜರಗುತ್ತಲೇ ಇರುತ್ತವೆ. ಹಾಗಾಗಿ ನೀತಿ ಆಯೋಗವು ಪ್ರಜಾಪ್ರಭುತ್ವ ವ್ಯವಸ್ಥೆ ಸದಾ ಚುನಾವಣಾ ಗುಂಗಿನಲ್ಲಿರುತ್ತದೆ ಎಂದಿದೆ. 1952 ರಿಂದ ಪ್ರಾರಂಭವಾದ ಸಾರ್ವತ್ರಿಕ ಚುನಾವಣೆಗಳು 1967ರ ವರೆಗೆ ಲೋಕಸಭೆ ಹಾಗೂ ರಾಜ್ಯ ವಿಧಾನಸಭೆಗಳ ಚುನಾವಣೆಗಳನ್ನು ಒಟ್ಟಾಗಿಯೆ ಎದುರಿಸಿದ್ದವು. ನಂತರದಲ್ಲಿ ನಡೆದ ರಾಜಕೀಯ ಬೆಳವಣಿಗೆಗಳಿಂದ ಏರು ಪೇರಾದವು. ಇದರ ಪರಿಣಾಮ ಚುನಾವಣಾ ಆಯೋಗವು ಸದಾ ಚುನಾವಣಾ ಪ್ರಕ್ರಿಯೆಯಲ್ಲಿಯೇ ಇರುವಂತಾಯಿತು. ಪ್ರಜಾಪ್ರಾತಿನಿಧ್ಯ ಕಾಯ್ದೆಯು ವಿಧಾನಸಭೆ ಹಾಗೂ ಸಂಸತ್ತಿನ ಅವಧಿಯ ಅಂತ್ಯಕ್ಕೆ 6 ತಿಂಗಳ ಮುಂಚಿತವಾಗಿ ಚುನಾವಣೆಯನ್ನು ಘೋಷಿಸುವ ಅಧಿಕಾರ ನೀಡಿದೆ. ಹಾಗೆಯೇ ಭಾರತದ ಸಂವಿಧಾನ ಅನುಚ್ಛೇದ 356 ಅವಧಿ ಮುಗಿದಿದ್ದರೂ 6 ತಿಂಗಳವರೆಗೆ ಚುನಾವಣೆ ಮುಂದೂಡುವ ಅಧಿಕಾರವನ್ನು ರಾಷ್ಟ್ರಪತಿಗಿದೆ. ಇವರೆಡೂ ಅಂಶಗಳನ್ನು ಗಮನಿಸಿದರೆ ಸಮಯದ ಹೊಂದಾಣಿಕೆಯೊಂದಿಗೆ ಏಕಕಾಲದ ಚುನಾವಣೆ ನಡೆಸಲು ಅವಕಾಶವನ್ನು ಕಲ್ಪಿಸಿದಂತಾಗಿದೆ.

ಒಂದು ದೇಶ-ಒಂದು ಚುನಾವಣೆ ಕೇವಲ ಏಕ ಕಾಲದಲ್ಲಿ ಚುನಾವಣೆಯನ್ನು ನಡೆಸುವುದು ಮಾತ್ರವಲ್ಲ, ಕೇಂದ್ರ ಚುನಾವಣಾ ಆಯೋಗ ಹಾಗೂ ರಾಜ್ಯ ಚುನಾವಣಾ ಆಯೋಗಳನ್ನು ಬೆಸೆಯುವಂಥದ್ದಾಗಿದೆ. ಈಗಿರುವ ಕಾನೂನಿನನ್ವಯ ಕೇಂದ್ರ ಚುನಾವಣಾ ಆಯೋಗವು ಸಾರ್ವತ್ರಿಕ ಚುನಾವಣೆಗಳಿಗಾಗಿ ಚುನಾವಣಾ ಪಟ್ಟಿಯನ್ನು ಸಿದ್ಧಗೊಳಿಸುತ್ತದೆ. ಅವುಗಳನ್ನು ಬೂತ್‌ಗಳೆಂದು ಕರೆಯಲಾಗುತ್ತದೆ. ರಾಜ್ಯ ಚುನಾವಣಾ ಆಯೋಗವೂ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗಾಗಿ ಮತದಾರ ಪಟ್ಟಿಯನ್ನು ಸಿದ್ಧಪಡಿಸುತ್ತದೆ. ಅವುಗಳನ್ನು ವಾರ್ಡ್‌ಗಳೆಂದು ಕರೆಯಲಾಗುತ್ತದೆ. ಒಂದೇ ಮತದಾರರ ಎರಡೆರೆಡು ಪಟ್ಟಿಗಳು ಸಿದ್ಧಗೊಳ್ಳುತ್ತವೆ. ಕೇಂದ್ರ ಆಯೋಗವು ತಯಾರಿಸುವ ಅದೇ ಮತದಾರರ ಪಟ್ಟಿಯನ್ನು ರಾಜ್ಯ ಚುನಾವಣಾ ಆಯೋಗವು ವಾರ್ಡ್‌ಗಳಾಗಿ ತಯಾರಿಸುವುದಕ್ಕೆ ಅಪಾರ ಪ್ರಮಾಣದ ಹಣ ಹಾಗೂ ಮಾನವ ಸಂಪನ್ಮೂಲ ವ್ಯರ್ಥವಾಗುತ್ತಿದೆ. ಒಂದು ರಾಷ್ಟ್ರ-ಒಂದು ಚುನಾವಣೆಯನ್ನು ಜಾರಿಗೆ ತರುವುದಕ್ಕಾಗಿ ಭಾರತದ ಸಂವಿಧಾನದ ಕೆಲವು ಅನುಚ್ಛೇದಗಳನ್ನು ಹಾಗೂ ಪ್ರಜಾಪ್ರಾತಿನಿಧ್ಯ ಕಾಯ್ದೆಯ ಕೆಲವು ಕಲಂಗಳನ್ನು ತಿದ್ದುಪಡಿ ಮಾಡಬೇಕಾಗುತ್ತದೆ. ಇದರಿಂದ ಮಾನವ ಸಂಪನ್ಮೂಲ ಮತ್ತು ಹಣದ ಅಪವ್ಯಯ ತಪ್ಪಿಸಬಹುದಾಗಿದೆ.

**ಭಾರತದಲ್ಲಿ ಅನುಷ್ಠಾನಕ್ಕೆ ತರಲು ಸಾಧ್ಯವೆ?**

ರಾಜ್ಯಗಳಲ್ಲಿ ಸರ್ಕಾರಗಳು ವಿಸರ್ಜನೆಗೊಂಡರೆ ಅಥವಾ ಅವಧಿಪೂರ್ವ ಚುನಾವಣೆ ಎದುರಾದರೆ ಅಂಥ ಸಂದರ್ಭ ಹೇಗೆ ಎದುರಿಸುವುದು? ಎಂಬ ಗೊಂದಲಗಳಿಗೆ ನೀತಿ ಆಯೋಗ, ಕಾನೂನು ಆಯೋಗಗಳು ಮಾರ್ಗಸೂಚಿಗಳನ್ನು ನೀಡಿವೆ.

ಗ್ರಾಪಂನಿಂದ ಪಾರ್ಲಿಮೆಂಟಿನ ಎಲ್ಲಾ ಚುನಾವಣೆಗಳಿಗೂ ಅನ್ವಯವಾಗುವ ಮತದಾರರ ಒಂದೇ ಪಟ್ಟಿಯನ್ನು ತಯಾರಿಸುವುದು. ಸಂವಿಧಾನದ ತಿದ್ದುಪಡಿಯ ಮೂಲಕ ಆಯ್ಕೆಯಾದ ದಿನದಿಂದ ಮುಂದಿನ ಐದು ವರ್ಷಗಳ ಅವಧಿಯವರೆಗೆ ವಿಧಾನಸಭೆ ಅಥವಾ ಸಂಸತ್ತಿನ ಅವಧಿ ಎಂಬುದರ ಬದಲಾಗಿ ಸಂಸತ್ತು ಹಾಗೂ ವಿಧಾನ ಮಂಡಲಗಳ ಅವಧಿಯನ್ನು ನಿಗದಿತ ದಿನಾಂಕದಿಂದ ಐದು ವರ್ಷಗಳವರೆಗೆ ಎಂಬುದಾಗಿ ತಿದ್ದುಪಡಿಗೊಳಿಸಿ ಏಕಕಾಲದಲ್ಲಿ ಕೇಂದ್ರ ಮತ್ತು ರಾಜ್ಯಗಳ ಚುನಾವಣೆಯನ್ನು ಕೈಗೊಳ್ಳಲು ಸಾಧ್ಯವಾಗಲಿದೆ ಎಂದು ಶಿಫಾರಸು ಮಾಡಿದೆ. ಉದಾಹರಣೆಗೆ ಈಗಿರುವ ಸಂಸತ್ತನ್ನು 17ನೇ ಸಂಸತ್ತು ಎಂದು ಘೋಷಿಸಲಾಗಿದೆ. ಒಂದು ರಾಷ್ಟ್ರ-ಒಂದು ಚುನಾವಣೆ ಜಾರಿಗೆ ಬಂದರೆ ಮುಂದಿನ 18ನೇ ಸಂಸತ್ತಿನ ಅವಧಿ 2024ರಿಂದ 2029 ರವರೆಗೆ ಎಂದು ನಿರ್ಧರಿತವಾಗುತ್ತದೆ. ಎಲ್ಲಾ ರಾಜ್ಯಗಳ ವಿಧಾನಮಂಡಲಗಳ ಚುನಾವಣೆಯನ್ನು ಒಂದು ಅಥವಾ ಎರಡು ಹಂತಗಳಲ್ಲಿ ಅವಧಿ ವಿಸ್ತರಣೆ ಅಥವಾ ಅವಧಿ ಪೂರ್ವ ಚುನಾವಣೆಯಾಗಿ ಪರಿಗಣಿಸಿ ಏಕಕಾಲದಲ್ಲಿ ಕೈಗೊಳ್ಳಲಾಗುತ್ತದೆ. ಹೀಗೆ ಆಯ್ಕೆಯಾಗುವ ಸಂಸತ್ ಹಾಗೂ ವಿಧಾನ ಮಂಡಲಗಳ ಅವಧಿಯು 5 ವರ್ಷಗಳದ್ದಾಗಿರುತ್ತದೆ. ಮಧ್ಯದಲ್ಲಿ ಯಾವುದಾದರೂ ರಾಜ್ಯ ವಿಧಾನಸಭೆ ಅಥವಾ ಪಾರ್ಲಿಮೆಂಟ್ ವಿಸರ್ಜನೆಯಾದರೆ ಆಗ ನಡೆಯುವ ಉಪಚುನಾವಣೆಯು ಉಳಿದ ಅವಧಿಯವರೆಗೆ ಮಾತ್ರ ಮೀಸಲಿರಿಸಿ ಚುನಾವಣೆಯನ್ನು ಕೈಗೊಳ್ಳಲಾಗುತ್ತದೆ. ಇಂಥ ಅಂಶ ಶಿಫಾರಸಿನಲ್ಲಿದೆ.

ಏಕಕಾಲದಲ್ಲಿ ಕೇಂದ್ರ ಹಾಗೂ ರಾಜ್ಯ ಚುನಾವಣೆಗಳನ್ನು ನಡೆಸಲು ತಾನು ಸಿದ್ಧವಿರುವುದಾಗಿ ಕೇಂದ್ರ ಚುನಾವಣಾ ಆಯೋಗವು ಹೇಳಿದೆ. ಇದರಿಂದ ಆರ್ಥಿಕ ನಷ್ಟದ ತಡೆ, ಚುನಾವಣಾ ಭ್ರಷ್ಟಾಚಾರಕ್ಕೂ ಕಡಿವಾಣ ಬೀಳಲಿದೆ. ಅಭಿವೃದ್ಧಿಪರ ತೀರ್ಮಾನಗಳನ್ನುಸರ್ಕಾರಗಳುಕೈಗೊಳ್ಳಲುಸಾಧ್ಯವಾಗಬಹುದು. ಪದೇ ಪದೆ ಬಂದೆರಗುವ ನೀತಿ ಸಂಹಿತೆ ಭೀತಿಯೂ ಇರುವುದಿಲ್ಲ.

ಈ ಕುರಿತು ಸಾಧಕ ಭಾದಕಗಳ ಬಗ್ಗೆ ಬೆಳಕು ಚೆಲ್ಲಬೇಕಾದ ಪ್ರಮುಖ ವಿರೋಧ ಪಕ್ಷಗಳು ಹಾಗೂ ಪ್ರಾದೇಶಿಕ ಪಕ್ಷಗಳು ತಮ್ಮ ಜವಾಬ್ದಾರಿಯಿಂದ ನುಣುಚಿಕೊಂಡಿರುವುದು ವಿಪರ್ಯಾಸವಾಗಿದೆ. ಕರ್ನಾಟಕ ವಿಧಾನಸಭೆಯಲ್ಲಾಗಬೇಕಾದ ಪ್ರಮುಖ ಚರ್ಚೆಯು ರಾಜಕೀಯ ಕಾರಣಕ್ಕಾಗಿ ಹಳಿ ತಪ್ಪಿದುದರಿಂದಾಗಿ ಅದರ ಬಗ್ಗೆ ಜನಾಭಿಪ್ರಾಯವನ್ನು ರೂಪಿಸುವ ಹೊಣೆ ಜನಸಾಮಾನ್ಯರ ಹೇಗಲೇರಿದೆ. ಹಾಗಾಗಿ ಸಾಹಿತಿಗಳ ಗೋಷ್ಠಿಗಳು, ಶಾಲಾ-ಕಾಲೇಜುಗಳಲ್ಲಿ ನಡೆಯುವ ಚರ್ಚಾ ಸ್ಪರ್ಧೆ ಹಾಗೂ ಪ್ರಬಂಧ ಸ್ಪರ್ಧೆಗಳು ಮಾಧ್ಯಮಗಳ ಚರ್ಚಾ ವಿಷಯಗಳು ಒಂದು ರಾಷ್ಟ್ರ-ಒಂದು ಚುನಾವಣೆ ಎಂಬ ಪರಿಕಲ್ಪನೆಯಕುರಿತುಅಭಿಪ್ರಾಯಗಳುವ್ಯಕ್ತವಾಗಲಾರಂಭಿಸಿದರೆ ಆಗ ಹೊಮ್ಮುವ ಪರ ಅಥವಾ ವಿರೋಧಿ ಜನಮತಕ್ಕೆ ನಿಜವಾದ ಮನ್ನಣೆ ದೊರೆಯಲಿದೆ.

**ನಿಮ್ಮ ಅಭಿಪ್ರಾಯ ತಿಳಿಸಿ: ಲೋಕಸಭೆ ಹಾಗೂ ಎಲ್ಲ ರಾಜ್ಯಗಳ ವಿಧಾನಸಭೆ ಚುನಾವಣೆ ಏಕಕಾಲಕ್ಕೆ ನಡೆಯಬೇಕೆಂಬ ಚರ್ಚೆ ಆರಂಭವಾಗಿದೆ. ಈ ಕುರಿತು ನಿಮ್ಮ ಅಭಿಪ್ರಾಯವನ್ನೂ ತಿಳಿಸಿ. ಇ ಮೇಲ್: UdayavaniVedike@manipalmedia.com, ವಾಟ್ಸ್ ಆ್ಯಪ್: 88611 96369**